ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಇಡಿ/ಕೆಇಎ/ಆಡಳಿತ/ಸಿ.ಆರ್–09/2023 ದಿನಾಂಕ: 29–10–2023

ಅಧಿಸೂಚನೆ

ಆಯುರ್ವೇದ, ಯೋಗ & ನ್ಯಾಚುರೋಪತಿ, ಯುನಾನಿ ಮತ್ತು ಹೋಮಿಯೋಪತಿ
ಸ್ನಾತಕೋತ್ತರ ಕೋರ್ಸುಗಳ ಪ್ರವೇಶ 2023–24 (ಪಿಜಿಆಯುಷ್)

AACCC, ಆಯುಷ್ ಸಚಿವಾಲಯ, ನವದೆಹಲಿ ಇವರ ಮಾರ್ಗದರ್ಶಿ ಸೂತ್ರಗಳ ಅನ್ವಯ, ಸರ್ಕಾರವು ತನ್ನ ಆದೇಶ ಸಂಖ್ಯೆ ಆಕುಕ 70 ಪಿಟಿಡಿ 2017 ಬೆಂಗಳೂರು ದಿನಾಂಕ 06–09–2017 ಹಾಗು ಆಯುಷ್ ಇಲಾಖೆಯ ಪತ್ರ ದಿನಾಂಕ 14–09–2023 ಅನ್ವಯ ಆಯುರ್ವೇದ, ಯುನಾನಿ ಮತ್ತು ಹೋಮಿಯೋಪತಿ ಸ್ನಾತಕೋತ್ತರ ಪದವಿ ಕೋರ್ಸುಗಳ ಪ್ರವೇಶಕ್ಕಾಗಿ AIAPGET-2023 ರಲ್ಲಿ ಅರ್ಹತೆ ಪಡೆದಿರುವ ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಅನ್ನು ನಡೆಸಲು ಪ್ರಾಧಿಕಾರಕ್ಕೆ ಆದೇಶಿಸಿದೆ.

ಕರ್ನಾಟಕ ಆಯುಷ್ ಇಲಾಖೆಯ ದಿನಾಂಕ 14-09–2023 ರ ಪತ್ರದ ಅನ್ವಯ, ಸರ್ಕಾರಿ ಮಹಾವಿದ್ಯಾಲಯಗಳ ಶೇ.85% (ಭಾರತ ಸರ್ಕಾರ ಶೇ.15% ಹೊರತುಪಡಿಸಿ) ಹಾಗೂ ಖಾಸಗಿ ಮಹಾವಿದ್ಯಾಲಯಗಳಲ್ಲಿ ಆಯುರ್ವೇದ, ಯುನಾನಿ ಮತ್ತು ಹೋಮಿಯೋಪತಿ ಪದ್ಧತಿಯ ಶೇ.100 ರಷ್ಟು ಸೀಟುಗಳನ್ನು, ಹಾಗೂ ಯೋಗ ಮತ್ತು ಪ್ರಕೃತಿ ಚಿಕಿತ್ಸೆಯ ಶೇ.25% ರಷ್ಟು ಸೀಟುಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಹಂಚಿಕೆ ಮಾಡಲಾಗುವುದು. AIAPGET-2023 ರಲ್ಲಿ ಅರ್ಹತೆಯನ್ನು ಪಡೆದಿರುವ ಎಲ್ಲಾ ಅಭ್ಯರ್ಥಿಗಳು ಪಿಜಿಆಯುಷ್ ಸೀಟುಗಳಿಗೆ ನೊಂದಯಿಸಿಕೊಳ್ಳಬಹುದು. SC/ST/Cat-1/2A/2B/3A/3B ಅರ್ಹತಾ ಮಾನದಂಡಗಳು ಕರ್ನಾಟಕದ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ ಎಂಬುದನ್ನು ಗಮನಿಸಿ.

AIAPGET - 2023 ರಲ್ಲಿ ಅರ್ಹತೆ ಪಡೆದಿರುವ ಅಭ್ಯರ್ಥಿಗಳಿಂದ ಸರ್ಕಾರವು ನಿಗದಿಪಡಿಸುವ 2023ನೇ ಸಾಲಿನ ಸ್ನಾತಕೋತ್ತರ ಆಯುಷ್ ಸೀಟುಗಳ / ಕೋರ್ಸುಗಳ ಪ್ರವೇಶಕ್ಕಾಗಿ ಪ್ರಾಧಿಕಾರವು ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಿದೆ. ಇಚ್ಛೆಯುಳ್ಳ ಅರ್ಹ ಅಭ್ಯರ್ಥಿಗಳು ದಿನಾಂಕ 30–10–2023 ರ ಬೆ.11.00 ರಿಂದ 02–11–2023 ರ ರಾ.11.59 ರೊಳಗೆ ಆನ್‌ಲೈನ್ ಮೂಲಕ ಕಡ್ಡಾಯವಾಗಿ ಅರ್ಜಿಯನ್ನು ಸಲ್ಲಿಸಬೇಕು. ನೊಂದಣಿ ಶುಲ್ಕ, Rs.2,000/- (Rs.1000/- for SC/ST and Cat-I of Karnataka) ದಿನಾಂಕ 03–11–2023 ರೊಳಗೆ ಆನ್‌ಲೈನ್ ಮೂಲಕ ಪಾವತಿಸಬೇಕು.

ವೇಳಾಪಟ್ಟಿ, ದಾಖಲಾತಿ ಪರಿಶೀಲನೆಗೆ ಮೂಲ ದಾಖಲಾತಿಗಳನ್ನು ಸಲ್ಲಿಸಬೇಕಾದ ವಿವರಗಳು ಮತ್ತು ಇನ್ನಿತರ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ನೋಡಲು ಸೂಚಿಸಿದೆ. AIAPGET - 2023 ರ ಮಾಹಿತಿ ಪುಸ್ತಕದಲ್ಲಿ ನೀಡಿರುವ ಅರ್ಹತಾ ಷರತ್ತುಗಳು ಮತ್ತು ಇತರೆ ಮಾಹಿತಿಗಳನ್ನೂ ಸಹ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ.

ಅಭ್ಯರ್ಥಿಯ ಅರ್ಹತೆಯು ತಾತ್ಕಾಲಿಕವಾಗಿರುತ್ತದೆ ಮತ್ತು AIAPGET-2023 ರ ಮಾಹಿತಿ ಪುಸ್ತಕದಲ್ಲಿ ನೀಡಿರುವ ಅರ್ಹತಾ ಷರತ್ತುಗಳಿಗೆ ಒಳಪಟ್ಟಿರುತ್ತದೆ ಹಾಗೆಯೇ ಪ್ರವೇಶವು ಸಂಬಂಧಿಸಿದ NCISM / NCH / ಸರ್ಕಾರ / ಅರ್ಹತಾ ಪ್ರಾಧಿಕಾರ / ವಿಶ್ವವಿದ್ಯಾನಿಲಯ ಅನುಮೋದನೆಗೆ ಒಳಪಟ್ಟಿರುತ್ತದೆ. ನೋಂದಣಿ ಮಾಡುವುದರಿಂದಾಗಲೀ ಅಥವಾ ದಾಖಲಾತಿಗಳನ್ನು ಪರಿಶೀಲನೆ ಮಾಡಿಕೊಳ್ಳುವುದರಿಂದಾಗಲೀ ಕರ್ನಾಟಕದ ಆಯುಷ್ ಸ್ನಾತಕೋತ್ತರ ಪದವಿ ಕೋರ್ಸುಗಳ ಪ್ರವೇಶಕ್ಕಾಗಿ ಅಭ್ಯರ್ಥಿಗಳು ಯಾವುದೇ ಹಕ್ಕನ್ನು ಪಡೆಯುವುದಿಲ್ಲ.

ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಲು ಕೋರಿದೆ.

(ಎಸ್. ರಮ್ಯ ಭಾಆಸೇ)
ಕಾರ್ಯನಿರ್ವಾಹಕ ನಿರ್ದೇಶಕರು.

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in